## 2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು.

**ಓ ಎಸ್ ನಂ.61-2013** **ಪಿ . ಡಬ್ಲ್ಯು: 1**

| | |
|---|---|
| ಸಾಕ್ಷಿದಾರರ ಹೆಸರು<br>ವಾಸ್ತವ್ಯ | ಎನ್.ಮಂಜುನಾಥ್<br>ದೇವಿರಮ್ಮನಹಳ್ಳಿ, ನಂಜನಗೂಡು ತಾ. |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 06-04-2024.** |

**<u>ಪಾಟೀ ಸವಾಲು: ಪ್ರತಿವಾದಿ ಪರ ಶ್ರೀ ಕೆ.ಆರ್ ವಕೀಲರಿಂದ:</u>**

ಪ್ರತಿವಾದಿಗಳು ದಾವಾ ಷೆಡ್ಯೂಲ್ ಸ್ವತ್ತನ್ನು ಮಾರಾಟ ಮಾಡುವುದಾಗಿ ಮಹದೇಶ್ವರ ಲೇಔಟ್ ನಲ್ಲಿ ಇರುವ ನಮ್ಮ ಮನೆಗೆ ಬಂದಿದ್ದರು. ನಾನು ವಕೀಲರಾಗಿ ವೃತ್ತಿ ನಿರ್ವಹಿಸುತ್ತಿರುತ್ತೇನೆ. ಕ್ರಯದ ಮಾತುಕತೆ ರೂ1,00,000/- ಗಳಿಗ ಆಗಿದ್ದು, ನಾನು ರೂ.90,000/- ಗಳನ್ನು ಮುಂಗಡವಾಗಿ ಪ್ರತಿವಾದಿಗಳಿಗೆ ಪಾವತಿಸಿರುತ್ತೇನೆ. 1 ನೇ ಪ್ರತಿವಾದಿ ರವರು ಕೆ.ಪಿ.ಪ್ರಕಾಶ್ ರವರ ಮುಖೇನ ಪರಿಚಯವಾಗಿರುತ್ತಾರೆ. ನಾನು ಹೇಳುವಂತೆ ನನ್ನ ಮತ್ತು ಪ್ರತಿವಾದಿಗಳ ನಡುವೆ ದಾವಾ ಷೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ಯಾವುದೇ ಕ್ರಯದ ಮಾತುಕತೆ ಆಗಿರುವುದಿಲ್ಲ ಎಂದರೆ ಸರಿಯಲ್ಲ. ಕ್ರಯದ ಕರಾರು ದಿ22-01-2010 ರಂದು ಆಗಿರುತ್ತದೆ. 12 ತಿಂಗಳ ವಾಯಿದೆ ಕಳೆದ ನಂತರ ನಾನು ಪ್ರತಿವಾದಿಗಳ ಮನೆಗೆ ಹೋಗಿ ಅವರನ್ನು ಭೇಟಿ ಮಾಡಿರುತ್ತೇನೆ. ನನ್ನ ಮತ್ತು ಪ್ರತಿವಾದಿಗಳ ನಡುವೆ ಈ ಹಿಂದೆ ಹಣಕಾಸಿನ ವ್ಯವಹಾರ ಇತ್ತು ಎಂದರೆ ಸರಿಯಲ್ಲ. ನಾನು ಹೇಳುವಂತೆ ಪ್ರತಿವಾದಿಗಳನ್ನು ಭೇಟಿ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಕ್ರಯದ ಕರಾರು ಪತ್ರವನ್ನು ಸೃಷ್ಟಿಸಿಕೊಂಡು ಈ ದಾವಾವನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಹೇಳುವಂತೆ ದಿ.22-04-2010 ರಂದು ಪ್ರತಿವಾದಿಗಳನ್ನು ಭೇಟಿ ಮಾಡಿ ಕರಾರಿನ ಪ್ರಕಾರ ಉಳಿಕೆ ಹಣವನ್ನು ಪಡೆದುಕೊಂಡು ಸೂಕ್ತ

ದಾಖಲೆಗಳನ್ನು ಒದಗಿಸಿಕೊಂಡು ನೋಂದಣಿ ಮಾಡಿಕೊಡುವಂತೆ ಕೇಳಿರುವುದಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ದಿ.29-10-2010 ರಂದು ಸಹ ನಾನು ಪ್ರತಿವಾದಿಗಳನ್ನು ಭೇಟಿ ಮಾಡಿ ನೋಂದಣಿ ಕ್ರಯ ಪತ್ರವನ್ನು ಮಾಡಿಕೊಡುವಂತೆ ಕೇಳಿದ್ದೆನು ಎಂದರೆ ಸರಿಯಲ್ಲ. ಆ ಸಮಯ ಪ್ರತಿವಾದಿಗಳು ಮತ್ತೆ 3 ತಿಂಗಳ ವಾಯಿದೆ ಕೇಳಿರುತ್ತಾರೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳ ನಡುವಳಿಕೆಯನ್ನು ಗಮನದಲ್ಲಿ ಇಟ್ಟುಕೊಂಡು ಹೆಚ್ಚಿಗೆ ಹಣವನ್ನು ಮುಂಗಡವಾಗಿ ನೀಡಿರುವುದರಿಂದ ಅನವಶ್ಯಕವಾಗಿ ಯಾವುದೇ ವ್ಯಾಜ್ಯವನ್ನು ಮಾಡಬಾರದು ಎಂದು ಸುಮ್ಮನಿದ್ದೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

2. ದಿ.14-01-2011 ರಂದು 1 ನೇ ಪ್ರತಿವಾದಿಯನ್ನು ಭೇಟಿ ಮಾಡಿ ಉಳಿಕೆ ಕ್ರಯದ ಮೊಬಲಗನ್ನು ಪಡೆದುಕೊಂಡು ಕ್ರಯದ ಕರಾರು ಪತ್ರದ ವ್ಯವಾಹರವನ್ನು ಪೂರ್ಣಗೊಳಿಸುವಂತೆ ಕೇಳಿಕೊಂಡಾಗ ಷೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟ ದಾಖಲೆಗಳು ಇನ್ನೂ ಸಿದ್ಧವಾಗಲಿಲ್ಲ ಎಂದು ಪುನಃ ಕಾಲಾವಕಾಶ ಪಡೆದುಕೊಂಡರು ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಹೇಳುವಂತೆ ದಿ.12-01-2012 ರಂದು ಪ್ರತಿವಾದಿಗಳಿಗೆ ಯಾವುದೇ ನೋಟಿಸ್ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಹೇಳುವಂತೆ ನನ್ನ ಮತ್ತು ಪ್ರತಿವಾದಿಗಳ ನಡುವೆ ಕ್ರಯದ ವ್ಯವಹಾರ ನಡೆಯದೇ ಇರುವುದರಿಂದ ಕರಾರಿನ ಪ್ರಕಾರ ನಡೆದುಕೊಳ್ಳುವ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದರೆ ಸರಿಯಲ್ಲ. ನಾನು ವಕೀಲರ ವೃತ್ತಿಯೊಂದಿಗೆ ಲೇವಾದೇವಿ ವ್ಯವಾಹಾರ ಮಾಡುತ್ತೇನೆ ಎಂದರೆ ಸರಿಯಲ್ಲ. ನನ್ನ ಮತ್ತು 1 ನೇ ಪ್ರತಿವಾದಿ ನಡುವೆ ಹಣಕಾಸಿನ ವ್ಯವಹಾರ ನಡೆಯುತ್ತಿತ್ತು ಎಂದರೆ ಸರಿಯಲ್ಲ. ಪ್ರತಿವಾದಿಗಳು ನನ್ನಿಂದ ಸಾಲವಾಗಿ ರೂ.50,000/- ಗಳನ್ನು ಪಡೆದುಕೊಂಡಿದ್ದರು ಎಂದರೆ ಸರಿಯಲ್ಲ. ಸದರಿ ಸಾಲದ ಹಣದ ಭದ್ರತೆಗಾಗಿ ನಾನು ಅವರಿಂದ ನಿಪಿ-1ರಂತೆ ಕ್ರಯದ ಕರಾರು ಪತ್ರವನ್ನು ಬರೆಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಪ್ರತಿವಾದಿಗಳು ಹಣವನ್ನು ಮರುಪಾವತಿ ಮಾಡಿದ

ನಂತರ ಕ್ರಯದ ಕರಾರು ಪತ್ರವನ್ನು ರದ್ದುಗೊಳಿಸಲು ಒಪ್ಪಿಕೊಂಡಿದ್ದೆನು ಎಂದರೆ ಸರಿಯಲ್ಲ. ಪ್ರತಿವಾದಿಗಳು ನನ್ನಿಂದ ಪಡೆದ ಸಾಲದ ಹಣ ಭದ್ರತೆಗಾಗಿ ಕ್ರಯದ ಕರಾರು ಪತ್ರವನ್ನು ಮಾಡಿಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ನಾನು 1 ನೇ ಪ್ರತಿವಾದಿಯವರಿಗೆ ನೀಡಿದ್ದ ಹಣದ ಬಾಬ್ತು ಚೆಕ್ಕುಗಳನ್ನು ಸಹ ಪಡೆದುಕೊಂಡಿದ್ದೆನು ಎಂದರೆ ಸರಿಯಲ್ಲ. 1 ನೇ ಪ್ರತಿವಾದಿ ನನಗೆ ನೀಡಿದ ಚೆಕ್ಕುಗಳನ್ನು ದುರುಪಯೋಗ ಪಡಿಸಿಕೊಂಡು ಬೇರೆಯವರ ಮುಖೇನ ಅವರ ವಿರುದ್ಧ ಚೆಕ್ ಬೌನ್ಸ್ ಪ್ರಕರಣಗಳನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ಒಂದು ವರ್ಷದ ನಂತರ ಅವರು ನನ್ನಿಂದ ಪಡೆದಿದ್ದ ಸಾಲದ ಬಾಬ್ತು ಬಡ್ಡಿಯನ್ನು ಪಾವತಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ಬಡ್ಡಿ ಹಣವನ್ನು ಪಾವತಿ ಮಾಡಿದ್ದರೂ, ಅಸಲು ಹಣವನ್ನು ಮರುಪಾವತಿ ಮಾಡಲು ಸಾಧ್ಯವಾಗದೇ ಇದ್ದ ಕಾರಣ ನಾನು ಪ್ರತಿವಾದಿಗಳನ್ನು ಹಣ ನೀಡುವಂತೆ ಒತ್ತಾಯಿಸಿದ್ದರಿಂದ ಕ್ರಯದ ಕರಾರು ಪತ್ರವನ್ನು ನವೀಕರಿಸಿ ನನಗೆ ನೀಡಿರುತ್ತಾರೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ನನ್ನಿಂದ ಪಡೆದ ಸಾಲದ ಹಣದ ಭದ್ರತೆಗಾಗಿ ನಿಪಿ-1 ಕ್ರಯದ ಕರಾರು ಪತ್ರವನ್ನು ಬರೆದುಕೊಟ್ಟಿರುವುದರಿಂದ ಕ್ರಯ ಪತ್ರವನ್ನು ನೋಂದಣಿ ಮಾಡಿಸಿಕೊಡುವ ಪ್ರಶ್ನೆ ಉದ್ಭವಿಸುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳಿಗೆ ನಾನು ಯಾವುದೇ ನ್ಯಾಯಾಲಯದಲ್ಲಿ ವ್ಯಾಜ್ಯ ಹೂಡುವುದಿಲ್ಲವೆಂದು ಬಡ್ಡಿ ಹಣವನ್ನು ಅವರಿಂದ ಪಡೆದುಕೊಂಡು ಪ್ರತಿವಾದಿಗಳ ವಿರುದ್ಧ ಈ ಪ್ರಕರಣವನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ನನಗೆ ಯಾವುದೇ ಕ್ರಯದ ಕರಾರು ಪತ್ರವನ್ನು ಬರೆದುಕೊಟ್ಟಿರುವುದಿಲ್ಲ, ಪ್ರತಿವಾದಿಗಳು ಬರೆದುಕೊಟ್ಟಿರುವ ದಾಖಲೆಗಳು ಸಾಲದ ಹಣದ ಭದ್ರತೆಗಾಗಿ ಬರೆದುಕೊಟ್ಟ ದಾಖಲಾತಿಗಳು ಆಗಿರುತ್ತದೆಯೇ ವಿನಃ ಕ್ರಯದ ಕರಾರು ಪತ್ರವಾಗಿರುವುದಿಲ್ಲ ಎಂದರೆ ಸರಿಯಲ್ಲ.

3. ನನ್ನ ಮತ್ತು ಪ್ರತಿವಾದಿಳಗ ನಡುವೆ 2010 ರಲ್ಲಿ ವ್ಯವಹಾರ ನಡೆದಿದ್ದು, ನಾನು 2013 ರಲ್ಲಿ ದಾವೆ ಹೂಡಿರುತ್ತೇನೆ ಎಂದರೆ ಸರಿ. ನಾನು ದಾವೆಯನ್ನು ದಾಖಲಿಸಿ ಇಲ್ಲಿಗೆ 13 ವರ್ಷಗಳಾಗಿರುತ್ತವೆ ಎಂದರೆ ಸರಿಯಲ್ಲ. ನಾನು

ಪ್ರತಿವಾದಿಗಳಿಂದ ಬಡ್ಡಿ ಹಣವನ್ನು ಪಡೆದುಕೊಳ್ಳುವ ಉದ್ದೇಶದಿಂದ ದಾವೆಯನ್ನು ಮುಂದೂಡುತ್ತಾ ಕಾಲಹರಣ ಮಾಡುತ್ತಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಇಂದಿಗೂ ಸಹ ದಾವಾ ಷೆಡ್ಯೂಲ್ ಸ್ವತ್ತಿನ ನಕ್ಷೆ ಸಿದ್ಧವಾಗಿರುವುದಿಲ್ಲ ಎಂದು ನುಡಿಯುತ್ತಾರೆ. ನಾನು ಸಾಲದ ಭದ್ರತೆಗಾಗಿ ಬರೆಸಿಕೊಂಡ ನಿಪಿ-1 ಕರಾರು ಪತ್ರವನ್ನು ದುರುಪಯೋಗಪಡಿಸಿಕೊಂಡು ಪ್ರತಿವಾದಿಗಳಿಂದ ದುರ್ಲಾಭ ಪಡೆಯುವ ಉದ್ದೇಶದಿಂದ ಈ ದಾವೆಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ಸಾಲದ ಭದ್ರತೆಗಾಗಿ ನಿಪಿ-1 ಅನ್ನು ಬರೆದುಕೊಟ್ಟಿರುತ್ತಾರೆಯೇ ವಿನಃ ಪ್ರತಿವಾದಿಗಳಿಗೆ ದಾವಾ ಷೆಡ್ಯೂಲ್ ಸ್ವತ್ತನ್ನು ಮಾರಾಟ ಮಾಡುವ ಇಚ್ಛೆಯನ್ನು ಹೊಂದಿರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳು ಸಾಲದ ಹಣದ ಭದ್ರತೆಗಾಗಿ ನಿಪಿ-1 ಅನ್ನು ಬರೆದುಕೊಟ್ಟಿರುವುದರಿಂದ ನಾನು ದಾವಾದಲ್ಲಿ ಕೋರಿರುವ ಪರಿಹಾರಕ್ಕೆ ಅರ್ಹನಾಗಿರುವುದಿಲ್ಲ, ಖರ್ಚು ಸಹಿತ ವಜಾಗೊಳ್ಳತಕ್ಕಾಗಿರುತ್ತದೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/-**

**ಕಿ.ಪ್ರ.ದ. ನ್ಯಾ ದಂ. ನಂಜನಗೂಡು**